ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಸಾರಿಗೆ ಇಲಾಖೆಯಲ್ಲಿ ಕೋವಿಡ್-19 ರಿಂದ ಉದ್ಭವಿಸಿರುವ ಸಮಸ್ಯೆಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

409(546) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-19 ರಿಂದ ಸಾರಿಗೆ ಇಲಾಖೆಯಲ್ಲಿ ಉದ್ಭವಿಸಿರುವ ಸಮಸ್ಯೆಗಳಾವುವು; ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; (ಮಾಹಿತಿ ನೀಡುವುದು)

(ಆ) ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೋವಿಡ್-19ರಿಂದ ಸುರಕ್ಷಿತವಾಗಿರಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಸಂಬಂಧ ತಮ್ಮ ಇಲಾಖೆಯಿಂದ ಕೋವಿಡ್-19ರ ಸಂಬಂಧ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ; (ವಿವರ ನೀಡುವುದು)

(ಇ) ಸಾರ್ವಜನಿಕ ಬಸ್‌ಗಳಲ್ಲಿ ಸಾಮಾಜಿಕ ಅಂತರ ಕಾಪಾಡುವ ಸಂಬಂಧ ಯಾವ ಕ್ರಮ ಕೈಗೊಳ್ಳಲಾಗಿದೆ; ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಯನ್ನು ಕಡಿತಗೊಳಿಸಲಾಗಿದೆಯೆ; ಇದರಿಂದ ಸರ್ಕಾರಕ್ಕೆ ಆಗಿರುವ ಲಾಭ ಮತ್ತು ನಷ್ಟವೇನು; ಇದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು?